# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 24(122) |
| ಸದಸ್ಯರ ಹೆಸರು | ಶ್ರೀ ಗೋವಿಂದ ರಾಜು<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 05/II/2023 |
| ಉತ್ತರಿಸುವವರು | ಪೌರಾಡಳಿತ ಮತ್ತು ಹಜ್ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕೋಲಾರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹರಿಯುವ ಮಳೆ ನೀರು. ಚರಂಡಿಗಳಲ್ಲಿ ಸರಾಗವಾಗಿ ಹರಿಯುತ್ತಿದೆಯೇ; | ಕೋಲಾರ ನಗರಸಭೆ ವ್ಯಾಪ್ತಿಯಲ್ಲಿ ಹರಿಯುವ ಮಳೆನೀರು ಚರಂಡಿಗಳಲ್ಲಿ ಬಹುತೇಕ ಚರಂಡಿಗಳಲ್ಲಿ ಸರಾಗವಾಗಿ ಹರಿಯುತ್ತಿದ್ದು, ಕೆಲವು ಕಡೆ ತಡೆಯಾಗಿರುತ್ತದೆ. |
| ಆ | ಹಾಗಿದ್ದಲ್ಲಿ, ಸ್ಥಳೀಯ ಸಂಸ್ಥೆಗಳಲ್ಲಿ ಯಾವ ವೈಜ್ಞಾನಿಕ ಕ್ರಮಗಳನ್ನು ಅನುಸರಿಸಲಾಗಿದೆ; | ಅಂತಹ ಕಡೆಗಳಲ್ಲಿ ಜೆ.ಸಿ.ಬಿ, ಇಟಾಚಿ ಮತ್ತು ಮಾನವ ಸಂಪನ್ಮೂಲಗಳನ್ನು ಉಪಯೋಗಿಸಿ ಅಡೆತಡೆಗಳನ್ನು ತೆರವುಗೊಳಿಸಿ ಸರಾಗವಾಗಿ ಹರಿಯಲು ಕ್ರಮ ವಹಿಸಲಾಗುತ್ತಿದೆ. |
| ಇ | ಪ್ರಸ್ತುತ ಇರುವಂತಹ ಚರಂಡಿ ಮತ್ತು ಕಾಲುವೆಗಳಲ್ಲಿ ಹರಿಯುವಂತಹ ನೀರು ಆರಂಭದಿಂದ ಅಂತ್ಯದವರೆಗೆ ಸರಾಗವಾಗಿ ಹರಿಯದೆ, ನೀರು ಎಲ್ಲೆಂದರಲ್ಲಿ ನಿಲ್ಲುತ್ತಿರುವುದರಿಂದ ಸೊಳ್ಳೆಗಳು ಹೆಚ್ಚಾಗಿ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅಂತಹ ದೂರುಗಳು ಕಂಡುಬಂದಂತಹ ಸ್ಥಳಗಳಲ್ಲಿ ತುರ್ತಾಗಿ ಜೆ.ಸಿ.ಬಿ/ಇಟಾಚಿ ಮತ್ತು ಮಾನವ ಸಂಪನ್ಮೂಲಗಳನ್ನು ಉಪಯೋಗಿಸಿ ನೀರು ಸರಾಗವಾಗಿ ಹರಿಯುವಂತೆ ಕ್ರಮ ಕೈಗೊಳ್ಳಲಾಗುತ್ತಿದೆ ಹಾಗೂ ಸೊಳ್ಳೆಗಳು ಹೆಚ್ಚಾಗಿದ್ದಲ್ಲಿ ಫಾಗಿಂಗ್ ಮತ್ತು ಸ್ಪ್ರೇಯಿಂಗ್ ಮುಖಾಂತರ ಸೊಳ್ಳೆಗಳನ್ನು ತಡೆಗಟ್ಟಲು ಕ್ರಮ ವಹಿಸಲಾಗುತ್ತಿದೆ. |
| ಈ | ಚರಂಡಿಗೂ ಮತ್ತು ಕಾಲುವೆಗಳ ನಡುವೆ ಭೂಮಿಯ ಸಮತೋಲನಾ ಮಟ್ಟ ಇಲ್ಲದಿರುವುದರಿಂದ ನೀರು ಸರಾಗವಾಗಿ ಹರಿಯುತ್ತಿಲ್ಲದಿರುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | ಕೋಲಾರ ನಗರಸಭೆ ವ್ಯಾಪ್ತಿಯಲ್ಲಿ ಅಂತಹ ಸ್ಥಳಗಳಲ್ಲಿ ಚರಂಡಿ ಮತ್ತು ಕಾಲುವೆಗಳ ನಡುವೆ ಭೂಮಿಯ ಸಮತೋಲನ ಮಟ್ಟ ಇಲ್ಲದಿರುವುದರಿಂದ ಚರಂಡಿಯನ್ನು ಮಾರ್ಪಡಿಸಿ ಸರಾಗವಾಗಿ ನೀರು ಹರಿಯಲು ಕ್ರಮ ವಹಿಸಲಾಗುತ್ತಿದೆ. |

**ಇ-ಸಂಖ್ಯೆ: ನಅಇ 168 ಜಿಇಎಲ್ 2023**

(ರಹೀಂ ಖಾನ್)
ಪೌರಾಡಳಿತ ಮತ್ತು ಹಜ್ ಸಚಿವರು